



ಅರುಣ ಪಿ. ಭಟ್ಟ

## ವಾರಭವಿಷ್ಯ: 27.8.2020ರಿಂದ 2.9.2020ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಸವಾಲೊಂದು ಒಗ್ಗಟ್ಟಾಗಿ ಕೆಲಸ ಮಾಡುವುದಕ್ಕೆ ಪ್ರೇರಣೆ ನೀಡುತ್ತದೆ. ಶುಭದಿನ 1. ಗಣಪತಿಗೆ 108 ದೂರ್ವಾರ್ಚನೆ ಮಾಡಿಸಿ.




ಕುಟುಂಬ ಬಗ್ಗೆ ಹೆಮ್ಮೆ ಪಡುವಂತಹ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 28. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಈ ಬಲಪಡಿಸುವ ಪ್ರಕ್ರಿಯೆಯಲ್ಲಿ ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ಶುಭದಿನ 30. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದೀರಿ. ನಿಮ್ಮ ಉತ್ಸಾಹ ಸಂತಸವಾದ ವಾತಾವರಣವನ್ನು ಸೃಷ್ಟಿ ಮಾಡುತ್ತದೆ. ನಿಮ್ಮ ಪ್ರೀತಿಪಾತ್ರರಿಗೆ ಉಡುಗೊರೆ ನೀಡಲಿದ್ದೀರಿ. ಶುಭದಿನ 28. ಹನುಮಾನ್ ಚಾಲಿಸ್ ಪಠಿಸಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ– ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಶುಭದಿನ 29. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರರು ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ 27. ಆದಿತ್ಯ ಹೃದಯ ಪಠಿಸಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಶುಭದಿನ 28. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಶುಭದಿನ 31. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಆ ಮೂಲಕ ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಆದರೆ ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಶುಭದಿನ 30. ವಿಷ್ಣು ಸಹಸ್ರನಾಮ ಪಠಿಸಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 1. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣ ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 28. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಈ ವಾರ ನಿಮ್ಮ ಧೈರ್ಯ ಹೆಚ್ಚಳ ಆಗಲಿದೆ. ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂತಹ ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ವಾರದ ಮೊದಲ ಭಾಗದಲ್ಲಿ ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ಶುಭದಿನ 2. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.